ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 06–09–2021**

# ಪತ್ರಿಕಾ ಪ್ರಕಟಣೆ

**PRESS RELEASE**

## ನಮ್ಮ ಕರ್ನಾಟಕ ರಾಜ್ಯ ಪೊಲೀಸ್: ದೇಶದಲ್ಲಿಯೇ ಮಾದರಿ ಇಲಾಖೆ

– ಮುಖ್ಯಮಂತ್ರಿ ಬಸವರಾಜ ಎಸ್. ಬೊಮ್ಮಾಯಿ

ಬೆಂಗಳೂರು, ಸೆಪ್ಟೆಂಬರ್ 6, (ಕರ್ನಾಟಕ ವಾರ್ತೆ) :

ದಕ್ಷತೆ ಹಾಗೂ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುತ್ತಿರುವ ನಮ್ಮ ರಾಜ್ಯದ ಪೊಲೀಸ್ ಇಲಾಖೆ ಇಡೀ ದೇಶಕ್ಕೆ ಮಾದರಿಯಾದ ಇಲಾಖೆಯಾಗಿದೆ ಇದು ನಮ್ಮ ಹೆಮ್ಮೆ ಎಂದು ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ ಅವರು ತಿಳಿಸಿದರು.

ಇಂದು ನಗರದ ನೃಪತುಂಗ ರಸ್ತೆಯ ಪೊಲೀಸ್ ಮಹಾನಿರ್ದೇಶಕರ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕರ್ನಾಟಕ ರಾಜ್ಯ ಹಿರಿಯ ಪೊಲೀಸ್ ಅಧಿಕಾರಿಗಳ ಸಮಾವೇಶದ ನಂತರ ಮಾಧ್ಯಮ ಮಿತ್ರರೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳು ಕಳೆದ ಎರಡು ವರ್ಷಗಳಿಂದ ಕೋವಿಡ್ –19ರ ಕಾರಣದಿಂದಾಗಿ ಪೊಲೀಸ್ ಸಮಾವೇಶವನ್ನು ನಡೆಸಿರಲಿಲ್ಲ. ನಮ್ಮ ಸರ್ಕಾರ ರಚನೆಯಾದ ಮೇಲೆ ಇಂದು ಈ ಸಮಾವೇಶವನ್ನು ನೆರವೇರಿಸಿರುವುದು ನನಗೆ ಸಂತೋಷ ತಂದಿದೆ ಎಂದು ಹೇಳಿದರು.

ನಾಗರೀಕರ ಜೀವನ ಮತ್ತು ಆಸ್ತಿಗಳನ್ನು ರಕ್ಷಣೆ ಮಾಡುವಂತಹ ಕಠಿಣ ಕೆಲಸಗಳನ್ನು ನಿರ್ವಹಣೆ ಮಾಡುವಲ್ಲಿ ನಮ್ಮ ರಾಜ್ಯ ಪೊಲೀಸ್ ಯಾವಾಗಲೂ ಮಂಚೂಣಿಯಲ್ಲಿರುತ್ತದೆ. ದಕ್ಷತೆ ಪ್ರಾಮಾಣಿಕತೆಯಿಂದ ಹಗಲು ರಾತ್ರಿ ಎನ್ನದೇ ತಮ್ಮ ಜೀವದ ಹಂಗು ತೊರೆದು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳು ಯಾವಾಗಲೂ ಸಿದ್ದರಿರುತ್ತಾರೆ.

ಅಪರಾಧ ನಿಯಂತ್ರಣ ಮತ್ತು ಸಾಮಾಜಿಕ ಕಾನೂನು ಸುವ್ಯವಸ್ಥೆಗೆ ನೇರ ಸಂಪರ್ಕವಿದ್ದು, ಅಪರಾಧಗಳು ನಿಯಂತ್ರಣವಾದಲ್ಲಿ ಮಾತ್ರ ಕಾನೂನು ಸುವ್ಯವಸ್ಥೆ ಹತೋಟಿಗೆ ಬರುತ್ತದೆ. ಪೊಲೀಸ್ ಇಲಾಖೆಯಲ್ಲಿ ಇದರ ಸುಧಾರಣೆಗೆ ಸರ್ಕಾರವು ಸಂಪೂರ್ಣ ಬೆಂಬಲ ನೀಡುವುದು.

ಪೊಲೀಸ್ ಇಲಾಖೆಗೆ ಅಗತ್ಯ ನೆರವು ನೀಡುವುದು ಅಲ್ಲದೆ ಮೃತ ಪೊಲೀಸ್ ಸಿಬ್ಬಂದಿಯ ಕುಟುಂಬವನ್ನು ರಕ್ಷಿಸುವುದು ರಾಜ್ಯ ಸರ್ಕಾರದ ಪ್ರಾಥಮಿಕ ಮತ್ತು ಮೂಲಭೂತ ಜವಾಬ್ದಾರಿಯಾಗಿದೆ. ಈ ಸಂಬಂಧ ಪೊಲೀಸ್ ಇಲಾಖೆ ಕೈಗೊಂಡಿರುವ ಕ್ರಮಗಳು ತುಂಬಾ ಶ್ಲಾಘನೀಯವಾಗಿದೆ. ಈ ಪರಂಪರೆ ಮುಂದುವರೆಯಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ರಾಜ್ಯದಲ್ಲಿ ಅಪರಾಧ ಪ್ರಕರಣಗಳ ತಡೆಗೆ ಆದಷ್ಟು ಕ್ರಮವಹಿಸಬೇಕು, ಕ್ರಿಮಿನಲ್ ಕೇಸುಗಳನ್ನು ತುರ್ತಾಗಿ ಬಗೆಹರಿಸಬೇಕು, ಅಪರಾಧಿಗಳನ್ನು ಪತ್ತೆ ಹಚ್ಚಿ ಅವರಿಗೆ ಪ್ರಾಮಾಣಿಕವಾಗಿ ಶಿಕ್ಷೆ ಕೊಡಿಸುವುದರೊಂದಿಗೆ ಕಾನೂನು

ಸುವ್ಯವಸ್ಥೆಯನ್ನು ಕಾಪಾಡಬೇಕು. ಸಾರ್ವಜನಿಕರಲ್ಲಿ ಆತ್ಮವಿಶ್ವಾಸ ಮೂಡಿಸಿ, ಅಪರಾಧಿಗಳಲ್ಲಿ ನಡುಕ ಉಂಟಾಗುವಂತೆ ಕಾರ್ಯನಿರ್ವಹಣೆ ಮಾಡಲು ಹಿರಿಯ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಬದಲಾಗುತ್ತಿರುವ ತಾಂತ್ರಿಕ ಅಪರಾಧ ಪ್ರಕರಣಗಳು, ಡ್ರಗ್ಸ್ ಪ್ರಕರಣಗಳು, ನವೀನ ರೀತಿಯ ಜೂಜು ಮತ್ತು ಅಡ್ಡೆಗಳು ಹಾಗೂ ಹೊಸ ರೀತಿಯ ಕ್ರಿಮಿನಲ್‌ಗಳನ್ನು ಪತ್ತೆ ಹಚ್ಚುವುದು ಮತ್ತು ಶಿಕ್ಷಿಸುವುದು ಇಂದು ಸವಾಲಿನ ಕೆಲಸವಾಗಿದೆ. ಇವೆಲ್ಲಕ್ಕೂ ಹೊಸ ಹೊಸ ತಂತ್ರಜ್ಞಾನವನ್ನು ಬಳಸಿಕೊಳ್ಳಬೇಕು. ಹೊಸ ಉಪಕರಣಗಳನ್ನು ಖರೀದಿ ಮಾಡಲು ಸರ್ಕಾರ ನೆರವು ನೀಡುವುದಾಗಿ ಅಧಿಕಾರಿಗಳಿಗೆ ತಿಳಿಸಲಾಗಿದೆ. ಪೊಲೀಸ್ ಇಲಾಖೆ ಜನಸ್ನೇಹಿ ಇಲಾಖೆಯಾಗಿ ಕಾರ್ಯನಿರ್ವಹಿಸಬೇಕು. ಅಪರಾಧಗಳನ್ನು ಆದಷ್ಟು ಮಟ್ಟ ಹಾಕಿ ಸಾರ್ವಜನಿಕರು ಭಯ ಬೀತಿ ಪಡದೆ ನಿರಾಂತಕವಾಗಿ ಓಡಾಡುವಂತೆ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಇತ್ತೀಚೆಗೆ ಮಾದಕ ವಸ್ತು ಮಾಫಿಯಾವನ್ನು ನಿಯಂತ್ರಣಕ್ಕೆ ತರಲಾಗಿದೆ. ರಾಜ್ಯದಲ್ಲಿ ಇಷ್ಟು ದೊಡ್ಡ ಮೊತ್ತದಲ್ಲಿ ಹಿಂದೆಂದೂ ಡ್ರಗ್ಸ್ ಪತ್ತೆಯಾಗಿರುವುದಿಲ್ಲ. ಇತ್ತೀಚೆಗೆ ಡ್ರಗ್ಸ್ ಪ್ರಕರಣಗಳು ಹೆಚ್ಚಾಗುತ್ತಿದ್ದು ಇದನ್ನು ಮಟ್ಟಹಾಕುವಲ್ಲಿ ಇಲಾಖೆ ತುಂಬಾ ಶ್ರಮವಹಿಸಿ ಕಾರ್ಯನಿರ್ವಹಿಸುತ್ತಿದೆ.

ಬೆಂಗಳೂರು ಸುತ್ತಮುತ್ತಲೂ ಭೂ ವಿವಾದಗಳಿಗೆ ಕೈಹಾಕದೆ, ಪ್ರಾಮಾಣಿಕವಾಗಿ ದಕ್ಷತೆಯಿಂದ ಕಾರ್ಯನಿರ್ವಹಿಸಬೇಕು. ಅದೇ ರೀತಿ ಜಿಲ್ಲೆಗಳಲ್ಲಿ ನಡೆಯುತ್ತಿರುವ ಮರಳು ಮಾಫಿಯಾ ದಂದೆಯನ್ನು ನಿಗ್ರಹ ಮಾಡಲು ಕ್ರಮವಹಿಸಲು ತಿಳಿಸಲಾಗಿದೆ

ಹಿರಿಯ ಅಧಿಕಾರಿಗಳಿಂದ ಕಿರಿಯ ಅಧಿಕಾರಿಗಳವರೆಗೂ ರಿಪೋರ್ಟಿಂಗ್ ಸಿಸ್ಟಮ್ ಜಾರಿಯಾಗಬೇಕು. ಇದಕ್ಕಾಗಿ ಪೊಲೀಸ್ ಮಹಾನಿರ್ದೇಶಕರಿಂದ ಹಿಡಿದು ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಮ್ಮದೇ ಆದ ಡ್ಯಾಶ್‌ಬೋರ್ಡ್ ರೂಪಿಸಿ ಪ್ರತಿ ನಿತ್ಯ ದಾಖಲಾಗುವ ಪ್ರಕರಣಗಳನ್ನು ಪರಿಶೀಲನೆ ಮಾಡಿ ಬಗೆಹರಿಸಬೇಕು. ದಸ್ತಗಿರಿ ಆಗಿರುವ ಪ್ರಕರಣಗಳ ಸಂಖ್ಯೆ ಮತ್ತು ಇತ್ಯರ್ಥವಾದ ಪ್ರಕರಣಗಳು ಹಾಗೂ ಕ್ರಮ ಕೈಗೊಂಡಿರುವ ಪ್ರಕರಣಗಳನ್ನು ಡ್ಯಾಶ್ ಬೋರ್ಡ್‌ನಲ್ಲಿ ಹಾಕುವ ವ್ಯವಸ್ಥೆ ಮಾಡಬೇಕು. ಯಾವುದೇ ಹಂತದಲ್ಲಿ ತಪ್ಪುಗಳು ನಡೆಯದಂತೆ ನೋಡಿಕೊಳ್ಳಬೇಕು. ಪೊಲೀಸ್ ಇಲಾಖೆಯಲ್ಲಿ ಮಧ್ಯವರ್ತಿಗಳಿಗೆ ಅವಕಾಶ ನೀಡಬಾರದು.

ಆರ್ಥಿಕ ಮತ್ತು ಸೈಬರ್ ಕ್ರೈಂ ನಿಯಂತ್ರಣ ಮಾಡಲು ಪ್ರತ್ಯೇಕ ತಾಂತ್ರಿಕ ವಿಭಾಗಗಳನ್ನು ರಚಿಸಲು, ಐಎಸ್‌ಡಿಯ ಬಲವರ್ಧನೆ ಮಾಡಲು ತಿಳಿಸಲಾಗಿದೆ. ಬಂಧೀಖಾನೆ, ಅಗ್ನಿಶಾಮಕದಳದ ಸುಧಾರಣೆಯಾಗುವುದರೊಂದಿಗೆ ಗುಪ್ತಚರ ವಿಭಾಗ ಮತ್ತು ಸಿಓಡಿ ವಿಭಾಗವು ಪುನರ್‌ರಚನೆ ಹಾಗೂ ತಾಂತ್ರಿಕವಾಗಿ ಮೇಲ್ದರ್ಜೆಗೇರಿಸಬೇಕು. ಅಗತ್ಯವಿದ್ದಲ್ಲಿ ಅತ್ಯಾಧುನಿಕ ಉಪಕರಣಗಳ ಖರೀದಿಗೆ ಕ್ರಮವಹಿಸಬೇಕು. ಇದಕ್ಕೆ ಸರ್ಕಾರದಿಂದ ಅಗತ್ಯ ನೀಡಲಾಗುವುದು ಎಂದು ತಿಳಿಸಿದರು.

ಸಮಾವೇಶದ ಆರಂಭದಲ್ಲಿ ಮುಖ್ಯಮಂತ್ರಿಗಳು ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ ಪ್ರಕಟಿಸಿರುವ ಕಾಫಿಟೇಬಲ್ ಬುಕ್, ಸೇವೆಯಲ್ಲಿದ್ದಾಗ ಮರಣ ಹೊಂದಿದ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಒದಗಿಸಿರುವ ಪರಿಹಾರದ ಕುರಿತು ಹೊರ ತಂದಿರುವ ಕಿರು ಪುಸ್ತಕ ಬಿಡುಗಡೆ ಮಾಡಿದರು ಹಾಗೂ ಅಪರಾಧ ಹಿನ್ನೆಲೆಯುಳ್ಳ ವ್ಯಕ್ತಿಗಳ ಮುಖ ಗುರುತಿನ ನವೀನ ರೀತಿಯ ವ್ಯವಸ್ಥೆಗೆ ಚಾಲನೆ ನೀಡಲಾಗಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಗೃಹ ಸಚಿವ ಅರಗ ಜ್ಞಾನೇಂದ್ರ, ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್, ಪೊಲೀಸ್ ಮಹಾ ನಿರ್ದೇಶಕ ಪ್ರವೀಣ್ ಸೂದ್, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ಪ್ರಸಾದ್ ಸೇರಿದಂತೆ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೆಗಾ ಲೋಕ್ ಆದಾಲತ್

ಬೆಂಗಳೂರು, ಸೆಪ್ಟೆಂಬರ್ 06 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ರಾಜ್ಯಾದ್ಯಂತ ಮೆಗಾ ಲೋಕ್ ಆದಾಲತ್ ಅನ್ನು ಅಕ್ಟೋಬರ್ 23 ರಂದು ಹಮ್ಮಿಕೊಂಡಿದೆ.

ಲೋಕ್ ಆದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಇಚ್ಚಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿ/ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ/ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳಿಗೆ ಆನ್ಲೈನ್/ವಿಡಿಯೋ ಕಾನ್ಫರೆನ್ಸ್ / ಇ-ಮೇಲ್ / ಎಸ್.ಎಂ.ಎಸ್ / ವಾಟ್ಸ್ ಆಪ್ / ಎಲೆಕ್ಟ್ರಾನಿಕ್ ಮೋಡ್ / ಖುದ್ದಾಗಿ ಹಾಜರಾಗುವ ಮುಖಾಂತರ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: www.kslsa.kar.nic.in, ದೂರವಾಣಿ ಸಂಖ್ಯೆ: 080–22111730 ಹಾಗೂ ನ್ಯಾಯ ಸಂಯೋಗ, ಕಾನೂನು ನೆರವು ಘಟಕ (ಬಹುವಿಧ ಸೇವೆಗಳು – ಒಂದೇ ಸೂರಿನ ಅಡಿಯಲ್ಲಿ) ನ್ಯಾಯ ದೇಗುಲ, ಮೊದಲನೇ ಮಹಡಿ, ಹೆಚ್.ಸಿದ್ಧಯ್ಯ ರಸ್ತೆ, ಬೆಂಗಳೂರು– 560027 ನ್ನು ಸಂಪರ್ಕಿಸಬಹುದಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಯವರ ಸಹಾಯವಾಣಿ ಸಂಖ್ಯೆ: 180042590900 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕಾನೂನುಬಾಹಿರವಾಗಿ ನೀರಿನ ಸಂಪರ್ಕ: ಗ್ರಾಹಕರ ವಿರುದ್ಧ ಕಾನೂನು ರೀತಿ ಕ್ರಮ

ಬೆಂಗಳೂರು, ಸೆಪ್ಟೆಂಬರ್ 06 (ಕರ್ನಾಟಕ ವಾರ್ತೆ):

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ನೀರು ಸರಬರಾಜು ವೇಳೆಯಲ್ಲಿ ತಪಾಸಣೆ ನಡೆಸಿದ್ದು, ಗ್ರಾಹಕರು ಮಾಪಕದ ಮೂಲಕ ನೀರು ಹರಿಯುವಿಕೆಯನ್ನು ತಪ್ಪಿಸಿ Bypass ಮುಖಾಂತರ ನೀರಿನ ಸಂಪರ್ಕವನ್ನು ಪಡೆಯುವುದು ಕಾನೂನು ಬಾಹಿರವಾಗಿರುತ್ತದೆ ಹಾಗೂ Bypass ಮುಖಾಂತರ ನೀರಿನ ಸಂಪರ್ಕವನ್ನು ಕಾನೂನುಬಾಹಿರವಾಗಿ ಪಡೆದಿರುವ ಗ್ರಾಹಕರ ವಿರುದ್ಧ ಕಾನೂನು ರೀತಿ ಕ್ರಮವಹಿಸಲಾಗುವುದು. ಆದ್ದರಿಂದ ಗ್ರಾಹಕರು ಇದಕ್ಕೆ ಆಸ್ಪದ ಕೊಡಬಾರದೆಂದು ಎಂದು ಬೆಂಗಳೂರು ನೀರು ಸರಬರಾಜು ಮತ್ತು ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ತಿಳಿಸಿದ್ದಾರೆ.

ಗ್ರಾಹಕರ ಮಾಸಿಕ ನೀರಿನ ಬೇಡಿಕೆಯನ್ನು ಆಧರಿಸಿ ಬೇಡಿಕೆ ವ್ಯತ್ಯಾಸ ಕಂಡುಬಂದಿರುವುದನ್ನು ಗಮನಿಸಿದ್ದು, ಮಾಪಕದ ಮೂಲಕ ನೀರು ಹರಿಯುವಿಕೆಯನ್ನು ತಪ್ಪಿಸಿ (Bypass ಮುಖಾಂತರ) ಪಡೆದಿರುವ ನೀರಿನ ಸಂಪರ್ಕವನ್ನು ಪತ್ತೆಹಚ್ಚಲು ತಂಡವನ್ನು ರಚಿಸಿ ಪತ್ತೆಹಚ್ಚಲಾಗಿರುತ್ತದೆ. ಇತ್ತೀಚೆಗೆ ಮಂಡಳಿಯ ಮುಖ್ಯ ಅಭಿಯಂತರರು(ಪೂರ್ವ) ವಲಯದಿಂದ 1436 ಹಾಗೂ ಮುಖ್ಯ ಅಭಿಯಂತರರು(ಪಶ್ಚಿಮ) ವಲಯದಿಂದ 2338, ಒಟ್ಟು 3774 ಸಂಪರ್ಕಗಳನ್ನು ಗುರುತಿಸಿ Bypass ಮುಖಾಂತರ ಪಡೆದಿರುವ ನೀರಿನ ಸಂಪರ್ಕವನ್ನು ಕಡಿತಗೊಳಿಸಿ, ದಂಡ ವಿಧಿಸುವುದರೊಂದಿಗೆ ಬ್ಯಾಕ್ ಬಿಲ್ಲಿಂಗ್ (Back billing) ಸಹ ಮಾಡಲಾಗುತ್ತಿದೆ ಎಂದು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## Disconnection of theft of water Bypassing the Water meter.

**Bengaluru, September 06 (Karnatak Information):**

BWSSB has inspected the water connection of the consumers during supply hours and the meter bypassed connections are disconnected by noticing the difference in water demand based on the monthly water

demand of the consumers. BWSSB has formed a team to detect such meter bypassed water connection and the team has noticed some of such connection. So far, 1436 meter bypassed water connection from CE(East) zone and 2338 connection from CE(West) zone, total 3774 connections were disconnected and penalized those consumers and Back billing is also being done.

It is illegal to have the water connection through bypassing the meter and board will take necessary legal action against the consumers if their water connection is meter bypassed. So consumers are requested not to involve in such illegal things.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

ಬೆಂಗಳೂರು, ಸೆಪ್ಟೆಂಬರ್ 06 (ಕರ್ನಾಟಕ ವಾರ್ತೆ):

**ದಿನಾಂಕ: 6.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 38 | ಉತ್ತಮ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 36 | ಉತ್ತಮ | $NO_2$ |
| 3 | ಕವಿಕ, ಮೈಸೂರುರಸ್ತೆ | 33 | ಉತ್ತಮ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 22 | ಉತ್ತಮ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 44 | ಉತ್ತಮ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 62 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 42 | ಉತ್ತಮ | $PM_{10}$ |
| **(6.9.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 39 | ಉತ್ತಮ | $PM_{2.5}$ |
| 9 | ಪೀಣ್ಯ | 57 | ತೃಪ್ತಿಕರ | $O_3$ |
| 10 | ಬಿಟಿಎಂ ಲೇಔಟ್ | 62 | ತೃಪ್ತಿಕರ | CO |
| | | | | |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| ಉತ್ತಮ (0–50) | ಕನಿಷ್ಠ ಪರಿಣಾಮ |
| ತೃಪ್ತಿಕರ (51–100) | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |

| | |
|---|---|
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 6.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 38 | Good | CO |
| 2 | Jayanagar 5th Block, Shalini ground | 36 | Good | $NO_2$ |
| 3 | KAVIKA, Mysore Road | 33 | Good | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 22 | Good | CO |
| 5 | HSR Layout, near Central Silkboard | 44 | Good | CO |
| 6 | City Railway Station, Magestic, Bengaluru | 62 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 42 | Good | $PM_{10}$ |
| **(6.9.2021 at 11.05 AM)** | | | | |
| 8 | BWSSB, Kadabesanahalli | 39 | Good | $PM_{2.5}$ |
| 9 | Peenya | 57 | Satisfactory | $O_3$ |
| 10 | BTM Layout | 62 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |